# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **746(854)** |
| **ಸದಸ್ಯರ ಹೆಸರು** | : | **ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)** |
| **ಉತ್ತರಿಸುವ ದಿನಾಂಕ** | : | **16.12.2024** |
| **ಉತ್ತರಿಸುವ ಸಚಿವರು** | : | **ಉನ್ನತ ಶಿಕ್ಷಣ ಸಚಿವರು** |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಯಾವ ಯಾವ ಪರೀಕ್ಷೆಗಳನ್ನು ನಡೆಸುತ್ತದೆ; ಕಳೆದ ಒಂದು ವರ್ಷದಲ್ಲಿ ರಾಜ್ಯ ಸರ್ಕಾರ ವಿವಿಧ ಹುದ್ದೆಗಳ ನೇಮಕಾತಿಗಾಗಿ ಪ್ರಾಧಿಕಾರಕ್ಕೆ ಬಂದಿರುವ ಪ್ರಸ್ತಾವನೆಗಳು ಯಾವುವು; | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಪರೀಕ್ಷೆಗಳ ವಿವರ ಕೆಳಕಂಡಂತಿದೆ.<br>1. ಯುಜಿಸಿಇಟಿ, ಡಿಸಿಇಟಿ, ಪಿಜಿಸಿಇಟಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು.<br>2. ವಸತಿ ಶಿಕ್ಷಣ ಸಂಸ್ಥೆಗಳ 6ನೇ ತರಗತಿಯ ಪ್ರವೇಶಕ್ಕೆ ಸಾಮಾನ್ಯ ಪ್ರವೇಶ ಪರೀಕ್ಷೆ.<br>3. ಕರ್ನಾಟಕ ರಾಜ್ಯ ಅರ್ಹತಾ ಪರೀಕ್ಷೆ (ಕೆಸೆಟ್).<br>4. ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಿಗೆ ಸಂಬಂಧಿಸಿದಂತೆ, ಯುಪಿಎಸ್‌ಸಿ, ಕೆಪಿಎಸ್‌ಸಿ, ಎಸ್.ಎಸ್.ಸಿ, ಆರ್.ಆರ್.ಬಿ ಮತ್ತು ಬ್ಯಾಂಕಿಂಗ್ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯ ತರಬೇತಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಪೂರ್ವಭಾವಿ ಪರೀಕ್ಷೆ.<br>5. ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇರ ನೇಮಕಾತಿ ಅಡಿ ಖಾಲಿ ಇರುವ ವಿವಿಧ ಹುದ್ದೆಗಳ ಭರ್ತಿಗಾಗಿ ಸಲ್ಲಿಸುವ ಪ್ರಸ್ತಾವನೆಯನುಸಾರ ನಡೆಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಗಳು. |
| ಆ) | ಕಳೆದ ಒಂದು ವರ್ಷದಲ್ಲಿ ಪ್ರಾಧಿಕಾರದಿಂದ ಯಾವ ಯಾವ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆಗಳನ್ನು ಹೊರಡಿಸಲಾಗಿದೆ; ಈ ಅಧಿಸೂಚನೆಗಳಿಗೆ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ಈ ಅರ್ಜಿಗಳಿಂದ ಸಂಗ್ರಹವಾದ ಒಟ್ಟು ಶುಲ್ಕದ ಮೊತ್ತವೆಷ್ಟು; (ಎಲ್ಲಾ ಅಧಿಸೂಚನೆಗಳವಾರು ವಿವರವಾದ ಮಾಹಿತಿಯನ್ನು ಒದಗಿಸುವುದು | ಕಳೆದ ಒಂದು ವರ್ಷದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ವಿವಿಧ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಹೊರಡಿಸಲಾಗಿರುವ ಇಲಾಖೆ/ಹುದ್ದೆವಾರು ಅಧಿಸೂಚನೆ, ಸ್ವೀಕೃತವಾದ ಅರ್ಜಿಗಳು, ಸಂಗ್ರಹವಾದ ಶುಲ್ಕ ಹಾಗೂ ಪ್ರಸ್ತುತ ಹಂತದ ವಿವರಗಳನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ. |
| ಇ) | ನೇಮಕಾತಿ ಹಂತದಲ್ಲಿರುವ ಅಧಿಸೂಚನೆಗಳು ಯಾವುವು; ಪರೀಕ್ಷೆ ಪ್ರಕ್ರಿಯೆಗಳು ಯಾವ ಹಂತದಲ್ಲಿವೆ ಹಾಗೂ ಯಾವ ಕಾಲಮಿತಿಯಲ್ಲಿ ಈ ನೇಮಕಾತಿಗಳನ್ನು ಪೂರ್ಣಗೊಳಿಸ ಲಾಗುವುದು. | |

| | | |
|---|---|---|
| ಈ) | ಪ್ರಾಧಿಕಾರವು ಎಲ್ಲಾ ಪರೀಕ್ಷೆಗಳ ಫಲಿತಾಂಶಗಳನ್ನು ತ್ವರಿತಗತಿಯಲ್ಲಿ ಬಿಡುಗಡೆ ಮಾಡಲು ಕೈಗೊಂಡ ಕ್ರಮಗಳೇನು ಹಾಗೂ ಪ್ರತಿ ಪರೀಕ್ಷೆಯಲ್ಲಿ ಅಭ್ಯರ್ಥಿಗಳ ಪರೀಕ್ಷಾ ಕೇಂದ್ರಗಳನ್ನು ಯಾವ ಮಾನದಂಡದಡಿಯಲ್ಲಿ ನಿಗಧಿಪಡಿಸಲಾಗುತ್ತದೆ? | ವಿವಿಧ ಇಲಾಖೆಗಳು/ನಿಗಮ/ಮಂಡಳಿಗಳು ಸಲ್ಲಿಸುವ ನೇಮಕಾತಿ ಪ್ರಸ್ತಾವನೆ ಅನುಸಾರ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಿ, ನಿಗದಿತ ಸಮಯದಲ್ಲಿ ದತ್ತಾಂಶವನ್ನು ಸಂಗ್ರಹಿಸಿ, ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗುತ್ತದೆ. ಪರೀಕ್ಷೆ ನಡೆಸುವ ಕುರಿತು ಕಾರ್ಯಕ್ರಮವನ್ನು ರೂಪಿಸಿಕೊಳ್ಳಲಾಗುತ್ತದೆ. ಪರೀಕ್ಷೆಯನ್ನು ನಿಗದಿತ ದಿನಾಂಕಗಳಲ್ಲಿ ನಡೆಸಿ, ಪರೀಕ್ಷೆ ಮುಗಿದ ಅತ್ಯಂತ ಅಲ್ಪ ಸಮಯದಲ್ಲಿಯೇ ತಾತ್ಕಾಲಿಕ ಕೀ ಉತ್ತರಗಳನ್ನು ಪ್ರಕಟಿಸಿ, ಆಕ್ಷೇಪಣೆಗಳನ್ನು ಆಹ್ವಾನಿಸಲಾಗುತ್ತದೆ. ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಯಿಂದ ಪರಿಶೀಲಿಸಿ, ತಜ್ಞರ ಸಮಿತಿಯ ಶಿಫಾರಸ್ಸಿನಂತೆ ಅಂತಿಮ ಕೀ ಉತ್ತರಗಳನ್ನು ಪ್ರಕಟಿಸಲಾಗುತ್ತದೆ. ನಂತರ ಅಂತಿಮ ಕೀ ಉತ್ತರಗಳ ಅನ್ವಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ, ಆಕ್ಷೇಪಣೆಗಳನ್ನು ಆಹ್ವಾನಿಸಲಾಗುತ್ತದೆ. ಆಕ್ಷೇಪಣೆಗಳನ್ನು ಪರಿಶೀಲಿಸಿ, ಅಂತಿಮ ಆಯ್ಕೆ ಪಟ್ಟಿ ತಯಾರಿಸಿ, ನಿಗದಿತ ಸಮಯದಲ್ಲಿ ಆಯಾ ಇಲಾಖೆಗೆ ಹಸ್ತಾಂತರಿಸಲಾಗುತ್ತದೆ.<br><br>ಈ ಎಲ್ಲಾ ವಿಧಾನಗಳನ್ನು ಅತ್ಯಂತ ಗೌಪ್ಯತೆಯಿಂದ ಮುನ್ನೆಚ್ಚರಿಕೆ ವಹಿಸಿ ನಡೆಸಲಾಗುತ್ತಿದೆ. ಅಭ್ಯರ್ಥಿಗಳು ಆಯಾ ಪರೀಕ್ಷೆಗೆ ಹಾಜರಾಗುವ ಕೇಂದ್ರಗಳ ಜಿಲ್ಲೆ ಮತ್ತು ತಾಲ್ಲೂಕುಗಳ ವಿವರಗಳನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ಪಡೆದು, ಪರೀಕ್ಷಾ ಕೇಂದ್ರಗಳನ್ನು ಗುರುತಿಸಿ, ಪರೀಕ್ಷೆಯನ್ನು ನಡೆಸಲಾಗುತ್ತದೆ.<br><br>ಒಂದು ವೇಳೆ ಅರ್ಜಿ ಸಲ್ಲಿಸಲಾದ ಅಭ್ಯರ್ಥಿಗಳ ಸಂಖ್ಯೆಯು ಹೆಚ್ಚಾದ ಜಿಲ್ಲೆಯಲ್ಲಿ, ಅದೇ ಜಿಲ್ಲೆಯ ಹತ್ತಿರದ ತಾಲ್ಲೂಕುಗಳಲ್ಲಿ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸಲಾಗುತ್ತಿದೆ. ಅಭ್ಯರ್ಥಿಗಳ ಸಂಖ್ಯೆ ತೀರ ಕಡಿಮೆ ಇದ್ದಲ್ಲಿ, ಬೆಂಗಳೂರಿನಲ್ಲಿ ಮಾತ್ರ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸಲಾಗುತ್ತದೆ. ಪರೀಕ್ಷಾ ಕೇಂದ್ರಗಳಿಗೆ ಅಭ್ಯರ್ಥಿಗಳನ್ನು Computer Randamwise ಮೂಲಕ ಹಂಚಿಕೆ ಮಾಡಲಾಗುತ್ತಿದೆ. |

**ಸಂಖ್ಯೆ: ಇಡಿ 493 ಟಿಇಸಿ 2024**

(ಡಾ. ಎಂ.ಸಿ.ಸುಧಾಕರ್)
**ಉನ್ನತ ಶಿಕ್ಷಣ ಸಚಿವರು**